ಸುವರ್ಣ ಕರ್ನಾಟಕ 2006

ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 367 ಗ್ರಾಪಂಅ 2006

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ
ಬೆಂಗಳೂರು. ದಿನಾಂಕ: 18-9-2006

# ಸುತ್ತೋಲೆ

ವಿಷಯ: ಮಕ್ಕಳ ಹಕ್ಕುಗಳನ್ನು ಕುರಿತು ಪ್ರತಿ ವರ್ಷ ನವೆಂಬರ್ ತಿಂಗಳಿನಲ್ಲಿ "ಮಕ್ಕಳ ಗ್ರಾಮ ಸಭೆ" ಏರ್ಪಡಿಸುವ ಬಗ್ಗೆ.

*****

ವಿಶ್ವ ಸಂಸ್ಥೆಯ ಮಕ್ಕಳ ಹಕ್ಕುಗಳ ಒಡಂಬಡಿಕೆಯನ್ನು ಜಾರಿಗೊಳಿಸಲು ಕೇಂದ್ರ ಸರ್ಕಾರವು 1992ರಲ್ಲಿ ವಿಶ್ವಸಂಸ್ಥೆಗೆ ತನ್ನ ಬದ್ಧತೆಯನ್ನು ವ್ಯಕ್ತಪಡಿಸಿರುತ್ತದೆ. ಮಕ್ಕಳ ಉಳಿವು, ರಕ್ಷಣೆ, ಅಭಿವೃದ್ಧಿ ಮತ್ತು ಭಾಗವಹಿಸುವಿಕೆಯ ಹಕ್ಕುಗಳನ್ನು ಜಾರಿಗೊಳಿಸುವಲ್ಲಿ ಸ್ಥಳೀಯ ಸರ್ಕಾರಗಳಾದ ಗ್ರಾಮಪಂಚಾಯ್ತಿಗಳ ಪಾತ್ರ ಮಹತ್ತರವಾಗಿದೆ. ಗ್ರಾಮ ಪಂಚಾಯ್ತಿಗಳು ನಡೆಸುವ ಗ್ರಾಮ ಸಭೆಗಳಲ್ಲಿ ಮಕ್ಕಳ ಸ್ಥಿತಿಗತಿ ಅವರುಗಳ ಅಭಿವೃದ್ಧಿ ಹಾಗೂ ಅವರುಗಳಿಗೆ ಸಂವಿಧಾನಾತ್ಮಕವಾಗಿ ಒದಗಿಸಿರುವ ಹಕ್ಕುಗಳ ಬಗ್ಗೆ ಗ್ರಾಮ ಪಂಚಾಯ್ತಿಗಳು ವಿಶೇಷವಾಗಿ ಚರ್ಚಿಸಿ ಗ್ರಾಮಸ್ಥರುಗಳಿಗೆ ಅವರುಗಳ ಜವಾಬ್ದಾರಿಯನ್ನು ತಿಳಿಸುವ ಗುರುತರ ಹೊಣೆಗಾರಿಕೆ ಗ್ರಾಮ ಪಂಚಾಯ್ತಿಗಳ ಮೇಲಿರುತ್ತದೆ. ಆದುದರಿಂದ ಪ್ರತಿ ವರ್ಷ ನವೆಂಬರ್ 13ರಿಂದ 30ರವರೆಗೆ ಮಕ್ಕಳ ಹಕ್ಕುಗಳ ಸಪ್ತಾಹವನ್ನು ಹಮ್ಮಿಕೊಳ್ಳುವಂತೆ ಹಾಗೂ ಈ ದಿನಗಳಲ್ಲಿ ವಿಶೇಷವಾಗಿ ಒಂದು ದಿನ ಮಕ್ಕಳ ಹಕ್ಕಿನ ಬಗ್ಗೆ, ಗ್ರಾಮಸ್ಥರು, ಪಾಲಕರು ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಮಕ್ಕಳ ಗ್ರಾಮಸಭೆಗಳನ್ನು ಏರ್ಪಡಿಸಲು ಸರ್ಕಾರ ನಿರ್ಧರಿಸಿರುತ್ತದೆ. ಈ ಗ್ರಾಮ ಸಭೆಯಲ್ಲಿ ವಿಶೇಷವಾಗಿ ಕೆಳಕಂಡ ಅಂಶಗಳನ್ನು ಸಹ ಚರ್ಚಿಸಲು ಸೂಚಿಸಲಾಗಿದೆ.

1) ಮಕ್ಕಳ ಆರೋಗ್ಯಕರ ಬೆಳವಣಿಗೆಗೆ ಪೌಷ್ಟಿಕ ಆಹಾರವನ್ನು ಒದಗಿಸುವುದು.

2) ಮಕ್ಕಳ ಬೌದ್ಧಿಕ ಬೆಳವಣಿಗೆ ಆಟಪಾಟಗಳ ವ್ಯವಸ್ಥೆಯನ್ನು ವೈಜ್ಞಾನಿಕವಾಗಿ ರೂಪಿಸುವುದು.

3) ಪ್ರತಿ 3 ವರ್ಷದಿಂದ 6 ವರ್ಷದ ಎಲ್ಲಾ ಮಕ್ಕಳು ಅಂಗನವಾಡಿ ಹಾಗೂ ಶಾಲೆಗಳಲ್ಲಿ ದಾಖಲಾಗಿ ಶಿಕ್ಷಣವನ್ನು ಪ್ರಾರಂಭಿಸುವುದು.

4) ಜೀತ ಪದ್ಧತಿ ಹಾಗೂ ಕೃಷಿ ಕಾರ್ಮಿಕ ವೃತ್ತಿಯಲ್ಲಿ ಮಕ್ಕಳನ್ನು ತೊಡಗಿಸುವವರ ವಿರುದ್ಧ ಜಾಗೃತಿ ಮೂಡಿಸುವುದು.

5) ಹೆಣ್ಣು ಮಕ್ಕಳ ಪೋಷಣೆ ಹಾಗೂ ರಕ್ಷಣೆ.

ಮೇಲ್ಕಂಡ ಅಂಶಗಳನ್ನಲ್ಲದೆ ಮಕ್ಕಳ ಪರವಾಗಿ ಸರ್ಕಾರ ಅನುಷ್ಠಾನಗೊಳಿಸುತ್ತಿರುವ ಯೋಜನೆಯ ಕಾರ್ಯಕ್ರಮಗಳನ್ನು ವಿವರವಾಗಿ ಚರ್ಚಿಸಿ ಗ್ರಾಮಸ್ಥರು ಹಾಗೂ ಪೋಷಕರುಗಳಿಗೆ ಹೆಚ್ಚಿನ ತಿಳುವಳಿಕೆ ನೀಡುವ ಕಾರ್ಯಕ್ರಮವಾಗಿರಬೇಕು. ಈ ಮಕ್ಕಳ ಹಕ್ಕುಗಳ ವಿಶೇಷ ಗ್ರಾಮಸಭೆಗೆ ಆಯಾ ಗ್ರಾಮಪಂಚಾಯ್ತಿ ವ್ಯಾಪ್ತಿಯ ಮಕ್ಕಳು, ಪೋಷಕರು, ಅಂಗನವಾಡಿ ಕಾರ್ಯಕರ್ತೆಯರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸೂಪರ್‌ವೈಸರ್‌ಗಳು, ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರು, ಎಲ್ಲಾ ಶಾಲಾ ಶಿಕ್ಷಕಿಯರು, ಶಿಕ್ಷಕರು, ಪೋಲೀಸ್ ಅಧಿಕಾರಿಗಳು, ಶಾಲಾ ಅಭಿವೃದ್ಧಿ ಮತ್ತು ಉಸ್ತುವಾರಿ ಸಮಿತಿಯ ಸದಸ್ಯರು, ಸ್ಥಳೀಯ ಸ್ವಯಂಸೇವಾ ಸಂಘಗಳ ಪ್ರತಿನಿಧಿಗಳು ಕಡ್ಡಾಯವಾಗಿ ಹಾಜರಾಗಲು ವ್ಯವಸ್ಥೆ ರೂಪಿಸಬೇಕು.

ಎಲ್ಲಾ ಗ್ರಾಮ ಪಂಚಾಯ್ತಿಗಳು ತಮ್ಮ ವ್ಯಾಪ್ತಿಯಲ್ಲಿರುವ ಮಕ್ಕಳ ಬಗ್ಗೆ ಅಂಕಿಸಂಖ್ಯೆ ಹಾಗೂ ಇನ್ನಿತರೆ ಮಾಹಿತಿಯನ್ನು ಕ್ರೋಡೀಕರಿಸಿಕೊಳ್ಳುವ ವ್ಯವಸ್ಥೆಯನ್ನು ರೂಪಿಸಿಕೊಳ್ಳಬೇಕು. ಎಲ್ಲಾ ಜಿಲ್ಲಾ ಪಂಚಾಯ್ತಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ವೈಯಕ್ತಿಕ ಗಮನಹರಿಸಿ ಮಕ್ಕಳ ಹಕ್ಕುಗಳ ವಿಶೇಷ ಗ್ರಾಮಸಭೆಯನ್ನು ಏರ್ಪಡಿಸಬೇಕೆಂದು ನಿರ್ದೇಶಿಸಲಾಗಿದೆ. ಈ ಬಗ್ಗೆ ಸರ್ಕಾರಕ್ಕೆ ವರದಿಯನ್ನು ಸಲ್ಲಿಸುವಂತೆ ಸೂಚಿಸಲಾಗಿದೆ.

(ಕೆ.ಎಸ್.ಶಾಮಸುಂದರ)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್. ಇಲಾಖೆ.

ಗೆ,

1) ಎಲ್ಲಾ ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯ್ತಿ, *
3) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರ ಮಾಹಿತಿಗಾಗಿ.
4) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಪ್ರಧಾನ ಕಾರ್ಯದರ್ಶಿ ಹಾಗೂ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರಿಗೆ,

* ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು ಈ ಸುತ್ತೋಲೆಯ ಪ್ರತಿಯನ್ನು ತಮ್ಮ ಆಡಳಿತ ವ್ಯಾಪ್ತಿಯ ಗ್ರಾಮಪಂಚಾಯ್ತಿಗಳಿಗೆ ಕಳುಹಿಸಲು ಹಾಗೂ ಪ್ರತಿ ವರ್ಷ ನವೆಂಬರ್ ಮಾಹೆಯಲ್ಲಿ ಮಕ್ಕಳ ಗ್ರಾಮಸಭೆಯನ್ನು ಏರ್ಪಡಿಸಲು ಜವಾಬ್ದಾರರಾಗಿರುತ್ತಾರೆ. ಈ ಬಗ್ಗೆ ಕಾರ್ಯವ್ಯವಸ್ಥೆಯನ್ನು ರೂಪಿಸಿ ಸಂಬಂಧಿಸಿದ ಜಿಲ್ಲಾ ಪಂಚಾಯ್ತಿತಿಗಳ ಮುಖಾಂತರ ಸರ್ಕಾರಕ್ಕೆ ವರದಿ ಕೊಡುವಂತೆ ನಿರ್ದೇಶಿಸಲಾಗಿದೆ.